R.P

ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-01.**

**ಸಂಖ್ಯೆ:ಸಿ1(7)ಕಾ.ವೇ.ಬ/ 123 /2020-21** **ದಿನಾಂಕ: 14/12/2020**

**-: ಜ್ಞಾಪನ :-**

ರವಾನಿಸಿದೆ
ದಿನಾಂಕ 31/12/2020

ವಿಷಯ:-ಸಾರ್ವಜನಿಕ ಶಿಕ್ಷಣ ಇಲಾಖೆಯ ಗ್ರೂಪ್-ಬಿ ಸರ್ಕಾರಿ ಪ್ರೌಢಶಾಲಾ ಮುಖ್ಯಶಿಕ್ಷಕರು/ತತ್ಸಮಾನ ವೃಂದದ ಅಧಿಕಾರಿಗಳಿಗೆ 10 ವರ್ಷಗಳ ಕಾಲಮಿತಿ ವೇತನ ಬಡ್ತಿ ಮಂಜೂರು ಮಾಡುವ ಬಗ್ಗೆ.

ಉಲ್ಲೇಖ:-1] ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 4 ಎಸ್‌ಡಿಇ 2005 ದಿ:04-04-2005

2] ಸರ್ಕಾರದ ಆದೇಶ ಸಂಖ್ಯೆ: ಎಫ್.ಡಿ 88 ಎಸ್.ಆರ್.ಪಿ(ಸಿ.ಎಸ್.ಸಿ) 81 ದಿನಾಂಕ: 27/03/1982

3] ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ಬೆಂಗಳೂರು ದಕ್ಷಿಣ ಜಿಲ್ಲೆಯವರು ಸಲ್ಲಿಸಿರುವ ಗ್ರೂಪ್ ಬಿ ವೃಂದದ ಅಧಿಕಾರಿಗಳ 10 ವರ್ಷಗಳ ಕಾಲಮಿತಿ ವೇತನ ಮಂಜೂರಾತಿ ಪ್ರಸ್ತಾವನೆಗಳು.

**&&&&**

**<u>ಪ್ರಸ್ತಾವನೆ:</u>**

ವಿಷಯಕ್ಕೆ ಸಂಬಂಧಿಸಿದಂತೆ 2010 ನೇ ಸಾಲಿನಲ್ಲಿ ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ ಸಾರ್ವಜನಿಕ ಶಿಕ್ಷಣ ಇಲಾಖೆಯ ಗ್ರೂಪ್-ಬಿ ಸರ್ಕಾರಿ ಪ್ರೌಢಶಾಲಾ ಮುಖ್ಯಶಿಕ್ಷಕರು/ತತ್ಸಮಾನ ಹುದ್ದೆಗೆ ನೇಮಕಾತಿ ಹೊಂದಿದ ಅಧಿಕಾರಿಗಳು 10 ವರ್ಷಗಳ ಕಾಲ ಯಾವುದೇ ಮುಂಬಡ್ತಿ ಇಲ್ಲದೇ ನಿರಂತರ ಒಂದೇ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವ ಸಂಬಂಧ ಉಲ್ಲೇಖ(2) ರ ಸರ್ಕಾರಿ ಆದೇಶದಂತೆ 10 ವರ್ಷಗಳ ಕಾಲಮಿತಿ ಮಂಜೂರಾತಿಗಾಗಿ ಉಲ್ಲೇಖ(3) ರಂತೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಉಲ್ಲೇಖ(1)ರ ಸರ್ಕಾರದ ಅಧಿಸೂಚನೆ ಪ್ರಕಾರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರು ಸರ್ಕಾರಿ ಪ್ರೌಢ ಶಾಲಾ ಮುಖ್ಯಶಿಕ್ಷಕರು ಹಾಗೂ ತತ್ಸಮಾನ ಗ್ರೂಪ್-ಬಿ ವೃಂದದ ಅಧಿಕಾರಿಗಳ ನೇಮಕಾತಿ ಪ್ರಾಧಿಕಾರ ಎಂದು ನೇಮಿಸಿ ಸರ್ಕಾರವು ಆದೇಶ ಹೊರಡಿಸಿದೆ.

ಕಾಲಮಿತಿ ವೇತನ ಬಡ್ತಿಯನ್ನು ಮಂಜೂರು ಮಾಡಲು ಸಲ್ಲಿಸಿರುವ ದಾಖಲೆಗಳನ್ನು ಪರಿಶೀಲಿಸಲಾಗಿ, ದಾಖಲೆಗಳು ಸಮರ್ಪಕವಾಗಿದ್ದು ಕಾಲಮಿತಿ ವೇತನ ಬಡ್ತಿಗೆ ಅರ್ಹರಿರುವುದರಿಂದ ಹಾಲಿ ಇರುವ ವೇತನ ಶ್ರೇಣಿ ರೂ:-43100-83900 ರಿಂದ 10 ವರ್ಷಗಳ ಕಾಲಮಿತಿ ವೇತನ ಬಡ್ತಿ ಶ್ರೇಣಿ ರೂ:-45300-88300 ರಲ್ಲಿ ವೇತನ ಬಡ್ತಿ ಮಂಜೂರು ಮಾಡುವ ಬಗ್ಗೆ ಪರಿಶೀಲಿಸಿ ಕೆಳಕಂಡಂತೆ ಆದೇಶ ಹೊರಡಿಸಿದೆ.

**<u>ಆದೇಶ:</u>**

ಉಲ್ಲೇಖಿತ ಸರ್ಕಾರದ ಆದೇಶಗಳನ್ವಯ ಸಾರ್ವಜನಿಕ ಶಿಕ್ಷಣ ಇಲಾಖೆಯ ಬೋಧಕ ವೃಂದಕ್ಕೆ ಸೇರಿದ ಗ್ರೂಪ್-ಬಿ ಹುದ್ದೆಯಲ್ಲಿ ಯಾವುದೇ ಬಡ್ತಿ ಇಲ್ಲದೆ ನಿರಂತವಾಗಿ 10 ವರ್ಷಗಳ ಸೇವೆಯನ್ನು ಪೂರೈಸಿರುವುದರಿಂದ ಈ ಕೆಳಗಿನ ತಖ್ತೆಯಲ್ಲಿ ವಿವರಿಸಿದ 06 ಅಧಿಕಾರಿಗಳಿಗೆ ಅವರ ಹೆಸರಿನ ಮುಂದೆ ಸೂಚಿಸಿರುವ ದಿನಾಂಕ ಮತ್ತು ವೇತನ ಶ್ರೇಣಿಯಲ್ಲಿ 10 ವರ್ಷಗಳ ಕಾಲಮಿತಿ ವೇತನ ಬಡ್ತಿಯನ್ನು ಮಂಜೂರು ಮಾಡಿದೆ.

| ಕ್ರ.ಸಂ | ಅಧಿಕಾರಿಗಳ ಹೆಸರು, ಪದನಾಮ ಹಾಗೂ ಸೇವೆ ಸಲ್ಲಿಸುತ್ತಿರುವ ಕಛೇರಿ ವಿಳಾಸ | ಗ್ರೂಪ್-ಬಿ ಹುದ್ದೆಯಲ್ಲಿ ಕರ್ತವ್ಯಕ್ಕೆ ಹಾಜರಾದ ದಿನಾಂಕ | 10 ವರ್ಷಗಳ ಕಾಲಮಿತಿ ವೇತನ ಬಡ್ತಿ ಮಂಜೂರು ಮಾಡಿದ ದಿನಾಂಕ | ಹಾಲಿ ಪಡೆಯುತ್ತಿರುವ ವೇತನ ಶ್ರೇಣಿ | 10 ವರ್ಷಗಳ ಕಾಲಮಿತಿ ವೇತನ ಬಡ್ತಿ ಯಲ್ಲಿ ನಿಗಧಿ ಪಡಿಸಿದ ವೇತನ ಶ್ರೇಣಿ |
|---|---|---|---|---|---|
| 01 | ಶ್ರೀಮತಿ ಗೀತಾ.ಟಿ ಮುಖ್ಯಶಿಕ್ಷಕರು, ಸರ್ಕಾರಿ ಪ್ರೌಢಶಾಲೆ ಕೆ.ಗೊಲ್ಲಹಳ್ಳಿ, ಬೆಂಗಳೂರು ದಕ್ಷಿಣ ಜಿಲ್ಲೆ | 19/07/2010 | 18/07/2020 | 43100-83900 | 45300-88300 |
| 02 | ಶ್ರೀ ಲಿಂಗೇಶ್.ಡಿ.ಎಸ್, ಮುಖ್ಯಶಿಕ್ಷಕರು, ಸರ್ಕಾರಿ ಪ್ರೌಢಶಾಲೆ ಬಿ.ನಾರಾಯಣಪುರ, ಬೆಂಗಳೂರು ದಕ್ಷಿಣ ಜಿಲ್ಲೆ | 19/07/2010 | 18/07/2020 | 43100-83900 | 45300-88300 |

| | | | | | |
|---|---|---|---|---|---|
| 03 | ಶ್ರೀಮತಿ ಚೇತನ.ಎಸ್, ಸಹಾಯಕ ಯೋಜನಾ ಸಮನ್ವಯಾಧಿಕಾರಿ, ಸಮಗ್ರ ಶಿಕ್ಷಣ ಕರ್ನಾಟಕ, ಉಪನಿರ್ದೇಶಕರ ಕಛೇರಿ ,ಸಾ.ಶಿ.ಇ, ಬೆಂಗಳೂರು ದಕ್ಷಿಣ ಜಿಲ್ಲೆ | 16/07/2010 | 15/07/2020 | 43100–83900 | 45300–88300 |
| 04 | ಶ್ರೀ ಮನ್ಸೂರ್.ಎಂ, ವಿಷಯ ಪರಿವೀಕ್ಷಕರು, ಉಪನಿರ್ದೇಶಕರ ಕಛೇರಿ, ಸಾ.ಶಿ.ಇ ಬೆಂಗಳೂರು ದಕ್ಷಿಣ ಜಿಲ್ಲೆ | 19/07/2010 | 18/07/2020 | 43100–83900 | 45300–88300 |
| 05 | ಶ್ರೀಮತಿ ನಾಗರತ್ನ.ಟಿ.ಎಸ್, ಉಪನ್ಯಾಸಕರು, ಡಯಟ್, ಬೆಂಗಳೂರು ನಗರ ಜಿಲ್ಲೆ | 28/07/2010 | 27/07/2020 | 43100–83900 | 45300–88300 |
| 06 | ಶ್ರೀ ಕೆ.ಎಂ.ಜಿಯಾಉಲ್ಲಾ, ವಿಷಯ ಪರಿವೀಕ್ಷಕರು, ಉಪನಿರ್ದೇಶಕರ ಕಛೇರಿ, ಸಾ.ಶಿ.ಇ ಬೆಂಗಳೂರು ದಕ್ಷಿಣ ಜಿಲ್ಲೆ | 21/07/2010 | 18/10/2020 | 43100–83900 | 45300–88300 |

**[ಮಾನ್ಯ ಆಯುಕ್ತರ ಆದೇಶದ ಮೇರೆಗೆ]**

28/12/20

(ಕೆಂಚೇಗೌಡ.ಎನ್)

ಜಂಟಿ ನಿರ್ದೇಶಕರು(ಆಡಳಿತ)(ಪ್ರಭಾರ)

ಇವರಿಗೆ:–

1. ಸರ್ಕಾರದ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು ಇವರಿಗೆ ಸೂಕ್ತ ಕ್ರಮಕ್ಕಾಗಿ.
3. ಉಪನಿರ್ದೇಶಕರು(ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ದಕ್ಷಿಣ ಜಿಲ್ಲೆ ರವರಿಗೆ ಮಾಹಿತಿಗಾಗಿ/ಅಗತ್ಯ ಕ್ರಮಕ್ಕಾಗಿ
4. ಪ್ರಾಂಶುಪಾಲರು, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಬೆಂಗಳೂರು ನಗರ ಜಿಲ್ಲೆ, ರಾಜರಾಜೇಶ್ವರಿ ನಗರ ಬೆಂಗಳೂರು–98
5. ಸಂಬಂಧಿಸಿದ ಅಧಿಕಾರಿಗೆ ಮಾಹಿತಿಗಾಗಿ.
6. ಕಛೇರಿ ಪ್ರತಿ.